## 21. 250 ವಾರ್ಡ್ ರಚನೆಗೆ ವಿಧಾನ ಸಭೆ ಒಪ್ಪಿಗೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ವಾರ್ಡ್‌ಗಳ ಸಂಖ್ಯೆಯನ್ನು 198 ರಿಂದ 250ಕ್ಕೆ ಹೆಚ್ಚಳ ಮಾಡುವಂತೆ ಶಾಸಕ ಎಸ್.ರಘು ನೇತೃತ್ವದ ಜಂಟಿ ಪರಿಶೀಲನಾ ಸಮಿತಿಯು ಸಲ್ಲಿಸಿರುವ ವಿಶೇಷ ವರದಿಗೆ ವಿಧಾನಸಭೆಯು ಒಪ್ಪಿಗೆ ನೀಡಿದೆ.

ಇದಕ್ಕೆ ಪೂರಕವಾಗಿ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ–1976ರ ನಿಯಮಾವಳಿಯಲ್ಲಿ ಸಣ್ಣ ಪ್ರಮಾಣದ ತಿದ್ದುಪಡಿ ಮಾಡಿ 200 ವಾರ್ಡ್‌ಗಳ (ಕಾಯಿದೆಯಲ್ಲಿ 200 ವಾರ್ಡ್‌ವರೆಗೆ ಅವಕಾಶವಿದೆ) ಹೆಸರಿನ ಬದಲಿಗೆ 250 ಎಂಬ ಪದ ಪ್ರಯೋಗಕ್ಕೆ ಒಪ್ಪಿಗೆ ಪಡೆದಿದೆ. ಪರಿಣಾಮ ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯು 198 ವಾರ್ಡ್‌ಗಳ ಬದಲಿಗೆ 250 ವಾರ್ಡ್‌ಗಳಿಗೆ ನಡೆಯುವುದು ಬಹುತೇಕ ಖಚಿತವಾಗಿದೆ.

ತಿದ್ದುಪಡಿ ಮೂಲಕ ಬಿಬಿಎಂಪಿ ವಿಧೇಯಕ–2020 ಮಂಡನೆ, ಅಂಗೀಕಾರ ವಿಳಂಬವಾದರೂ ಅಥವಾ ತಕ್ಷಣ ಹೈಕೋರ್ಟ್ ಚುನಾವಣೆ ನಡೆಸುವಂತೆ ಘೋಷಣೆ ಮಾಡಿದರೂ ಬಿಬಿಎಂಪಿ ವಾರ್ಡ್‌ಗಳನ್ನು 198 ರಿಂದ 250ಕ್ಕೆ ಪುನರ್ ರಚನೆ ಮಾಡಿ ಪರಿಷ್ಕೃತ ವಾರ್ಡ್‌ಗಳ ಸಂಖ್ಯೆಗೆ ಚುನಾವಣೆ ನಡೆಸಲು ಸರ್ಕಾರ ವೇದಿಕೆ ಸಜ್ಜುಗೊಳಿಸಿಕೊಂಡಿದೆ.

2020ನೇ ಸಾಲಿನ ಬಿಬಿಎಂಪಿ ವಿಧೇಯಕವನ್ನು (ಬಿಬಿಎಂಪಿ ವಿಧೇಯಕ–2020) ಪರಿಶೀಲಿಸಲು ಶಾಸಕ ಎಸ್. ರಘು ನೇತೃತ್ವದಲ್ಲಿ ಕರ್ನಾಟಕ ವಿಧಾನ ಮಂಡಲ ಜಂಟಿ ಪರಿಶೀಲನಾ ಸಮಿತಿಯನ್ನು ರಚನೆ ಮಾಡಲಾಗಿದೆ. ಆದರೆ, ಸಮಿತಿಯು ತನ್ನ ಅಂತಿಮ ವರದಿ ಸಲ್ಲಿಸಲು ನವೆಂಬರ್ ಅಂತ್ಯದವರೆಗೆ ಗಡುವು ಪಡೆದಿದ್ದು, ಅಲ್ಲಿಯವರೆಗೆ ವಿಧೇಯಕಕ್ಕೆ ಒಪ್ಪಿಗೆ ದೊರೆಯುವುದು ಅನುಮಾನ ಎಂಬಂತಾಗಿದೆ.

ಇದರ ನಡುವೆ ಸೆಪ್ಟೆಂಬರ್–15 ರಂದು ಸಮಿತಿಯು ಒಂದು ಪುಟದ ವಿಶೇಷ ವರದಿ ಸಲ್ಲಿಸಿ ಬಿಬಿಎಂಪಿಯ ಚುನಾಯಿತ ಸದಸ್ಯರ ಅವಧಿ ಮುಗಿದಿದ್ದು, ಮಹಾನಗರ ಪಾಲಿಕೆಗೆ ಚುನಾವಣೆ ನಡೆಸಬೇಕಾಗಿರುತ್ತದೆ. ಪ್ರಸ್ತುತ ವಿದ್ಯಮಾನಗಳು ಬೆಂಗಳೂರು ಮಹಾನಗರದಲ್ಲಿ ಹೆಚ್ಚಳವಾದ ಜನಸಂಖ್ಯೆ ಹಾಗೂ ವಿಸ್ತೀರ್ಣದ ಆಧಾರದ ಮೇಲೆ 1976 ಸಾಲಿನ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ ಪ್ರಕರಣ 7ಕ್ಕೆ ತಿದ್ದುಪಡಿ ತಂದು ವಾರ್ಡ್ ಹೆಚ್ಚಳಕ್ಕೆ ಅವಕಾಶ ಮಾಡಿಕೊಡಬೇಕು. ಇದಕ್ಕಾಗಿ 1976ನೇ ಸಾಲಿನ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ 7(1)ನೇ ಉಪಪ್ರಕರಣದ (ಎ) ಖಂಡದಲ್ಲಿ 200 ಬದಲಿಗೆ 250 ಎಂಬ ಪದ ಪ್ರಯೋಗಿಸಬೇಕು ಎಂದು ವರದಿ ನೀಡಿದ್ದರು.

ಈ ವರದಿಯನ್ನು ಒಪ್ಪಿರುವ ವಿಧಾನ ಸಭೆಯು ವಿಧೇಯಕಕ್ಕೆ ತಿದ್ದುಪಡಿ ತರುವ ಮೂಲಕ ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು 198 ರಿಂದ 250ಕ್ಕೆ ಹೆಚ್ಚಿಸಿ ಚುನಾವಣೆ ನಡೆಸಲು ವೇದಿಕೆ ಸಿದ್ಧಪಡಿಸಿದೆ.

**3 ನಗರ ಪಾಲಿಕೆಗೆ ಜಾರ್ಜ್ ಒತ್ತಾಯ:** ವಾರ್ಡ್ ಸಂಖ್ಯೆ ಹೆಚ್ಚಳಕ್ಕೆ ಕಾಂಗ್ರೆಸ್ ಶಾಸಕ ಕೆ.ಜೆ. ಜಾರ್ಜ್ ಆಕ್ಷೇಪ ವ್ಯಕ್ತಪಡಿಸಿ, ವಾರ್ಡ್‌ಗಳನ್ನು ವಿಭಜಿಸಲು ಆಕ್ಷೇಪವಿಲ್ಲ. ಆದರೆ 250 ವಾರ್ಡ್‌ಗಳಿಗೆ ಒಂದೇ ಪಾಲಿಕೆ ಇದ್ದರೆ ಆಡಳಿತ ನಡೆಸಲು ಕಷ್ಟವಾಗಲಿದೆ. 250 ವಾರ್ಡ್‌ಗಳನ್ನು ಮಾಡಿ 3 ಕಾರ್ಪೋರೇಷನ್ ರಚಿಸಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದರು. ಕಳೆದ ಅಧಿವೇಶನದಲ್ಲಿ ಬಿಬಿಎಂಪಿ ವಿಧೇಯಕ ಮಂಡಿಸಲಾಗಿತ್ತು. ಆದರೆ, ಆಡಳಿತ ಪಕ್ಷದ ಸದಸ್ಯರಿಂದಲೇ ತೀವ್ರ ವಿರೋಧ ವ್ಯಕ್ತವಾದ್ದರಿಂದ ಜಂಟಿ ಪರಿಶೀಲನಾ ಸಮಿತಿ ರಚಿಸಲಾಗಿತ್ತು.

ಆಧಾರ:ಕನ್ನಡ ಪ್ರಭ, ದಿನಾಂಕ:24.09.2020